ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 101 ಮುನೋಮು 2015

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 29-2-2016.

## ಸುತ್ತೋಲೆ

ವಿಷಯ : ಗ್ರಾಮಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳನ್ನು ನೋಂದಣಿ ಮಾಡುವಾಗ ಅನುಸರಿಸುವ ಕ್ರಮ.

ಉಲ್ಲೇಖ : (1) ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008 ದಿನಾಂಕ: 6-4-2009.
(2) ಸರ್ಕಾರದ ತಿದ್ದೋಲೆ ಸಂಖ್ಯೆ: ಕಂಇ 6 ಮುನೋಮು 2013 ದಿನಾಂಕ:24-1-2013 ಮತ್ತು 23-4-2014.
(3) ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 6 ಮುನೋಮು 2013 ದಿನಾಂಕ: 18-7-2014.
(4) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 266 ಗ್ರಾಪಂಅ 2015 (ಭಾಗ) ದಿನಾಂಕ: 13-1-2016.

*-*-*-*

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ಮತ್ತು (2)ರ ಸುತ್ತೋಲೆಗಳಲ್ಲಿ, ಗ್ರಾಮಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳನ್ನು ನೋಂದಣಿ ಮಾಡುವ ಸಮಯದಲ್ಲಿ ಕ್ರಮಬದ್ಧವಾದ ಸ್ವತ್ತುಗಳಿಗೆ ನಮೂನೆ 9 ಮತ್ತು 11-ಎ ಹಾಗೂ ಕ್ರಮಬದ್ಧವಲ್ಲದ ಸ್ವತ್ತುಗಳಿಗೆ 11-ಬಿ ಮಾತ್ರ ಪಡೆದು ನೋಂದಾಯಿಸಲು ನಿರ್ದೇಶನ ನೀಡಲಾಗಿದೆ.

ಉಲ್ಲೇಖ (3) ದಿನಾಂಕ: 18-7-2014ರ ಸುತ್ತೋಲೆಯಲ್ಲಿ ಕಾವೇರಿ ತಂತ್ರಾಂಶ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗಾಗಿ ಇರುವ "ಇ-ಸ್ವತ್ತು" ತಂತ್ರಾಂಶವನ್ನು ಸಂಯೋಜನೆ ಗೊಳಿಸಿರುವುದರಿಂದ, ದಿನಾಂಕ: 18-7-2014 ರಿಂದ ಕೃಷಿ ಜಮೀನಿನ ನೋಂದಣಿಗೆ "ಭೂಮಿ" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡುವ ವಿಧಾನದಲ್ಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗೆ ಇರುವ "ಇ-ಸ್ವತ್ತು" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡಲು ಆದೇಶಿಸಿದೆ. ಒಂದುವೇಳೆ "ಇ-ಸ್ವತ್ತು" ತಂತ್ರಾಂಶದಲ್ಲಿ ಮಾಹಿತಿ ಲಭ್ಯವಿಲ್ಲದಿದ್ದಲ್ಲಿ ಕಾವೇರಿ ತಂತ್ರಾಂಶದಿಂದ ಉತ್ಪತ್ತಿಯಾಗುವ ಹಿಂಬರಹವನ್ನು ದಸ್ತಾವೇಜನ್ನು ಹಾಜರುಪಡಿಸುವ ಪಕ್ಷಕಾರರಿಗೆ ನೀಡಲು ಸೂಚಿಸುತ್ತಾ, ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿಧಾನದಲ್ಲಿ ನೋಂದಣಿ ಮಾಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸೂಚಿಸಲಾಗಿರುತ್ತದೆ.

ಉಲ್ಲೇಖ (4) ದಿನಾಂಕ: 13-1-2016ರ ಆದೇಶದಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾಗ-6) ದಿನಾಂಕ: 21-1-2014 ರಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006ಕ್ಕೆ ತಿದ್ದುಪಡಿಯನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (2ನೇ ತಿದ್ದುಪಡಿ)

. . . . . 2

ನಿಯಮಗಳು, 2013ನ್ನು ದಿನಾಂಕ: 21-1-2014 ರಂದು ಹೊರಡಿಸಲಾಗಿದ್ದು, ಈ ತಿದ್ದುಪಡಿ ನಿಯಮಗಳನ್ವಯ ಗ್ರಾಮಪಂಚಾಯತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳ (ನಿವೇಶನ ಮತ್ತು ಕಟ್ಟಡಗಳಿಗೆ) ಸಂಭಂಧಿಸಿದ ತೆರಿಗೆ ನಿರ್ಧರಣಾ ಪಟ್ಟಿಯನ್ನು ನಮೂನೆ 11-ಬಿ ಮೂಲಕ ನಿರ್ವಹಿಸಲು ನಿಗದಿಪಡಿಸಲಾಗಿದೆ. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾಗ-6) ದಿನಾಂಕ: 3-2-2014 ರಲ್ಲಿ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ತೆರಿಗೆ ನಿರ್ಧರಣೆ ಪಟ್ಟಿಯನ್ನು ನಮೂನೆ 11-ಬಿ ಮೂಲಕ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುವ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಆದರೆ ಮೇಲಿನ ತಿದ್ದುಪಡಿ ನಿಯಮಗಳು ಜಾರಿಗೆ ಬಂದ ನಂತರ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ, ಕೆಲವು ತೊಂದರೆಗಳು, ಸಮಸ್ಯೆಗಳು ಮತ್ತು ಗೊಂದಲದಿಂದ ಕೂಡಿರುವ ಮನವಿಗಳು ಸರ್ಕಾರದಲ್ಲಿ ಸ್ವೀಕೃತವಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006ರ ನಿಯಮ 30 ರಿಂದ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದಿಂದ ತಾತ್ಕಾಲಿಕವಾಗಿ ಮತ್ತು ಮುಂದಿನ ಆದೇಶದವರೆಗೆ ವಿನಾಯಿತಿ ನೀಡಿ ಆದೇಶಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಪ್ರಸ್ತುತ ರಾಜ್ಯದ ಗ್ರಾಮಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳನ್ನು ಗ್ರಾಮ ಪಂಚಾಯಿತಿ ಸ್ವತ್ತುಗಳಿಗಾಗಿ ಇರುವ "ಇ-ಸ್ವತ್ತು" ತಂತ್ರಾಂಶವನ್ನು ನೋಂದಣಿ ಇಲಾಖೆಯ "ಕಾವೇರಿ" ತಂತ್ರಾಂಶದೊಂದಿಗೆ ಸಂಯೋಜನೆಗೊಳಿಸಿರುವುದರಿಂದ, ನೋಂದಣಿಗೆ ಹಾಜರುಪಡಿಸುವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳ ಮಾಹಿತಿಯನ್ನು "ಇ-ಸ್ವತ್ತು" ತಂತ್ರಾಂಶದಿಂದ ಪಡೆದು ನೋಂದಾಯಿಸಲಾಗುತ್ತಿದೆ. ಆದರೆ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹೆಚ್ಚಿನ ಭಾಗ ಅರಣ್ಯ ಪ್ರದೇಶವಿರುವ ಹಿನ್ನೆಲೆಯಲ್ಲಿ, "ಇ-ಸ್ವತ್ತು" ತಂತ್ರಾಂಶವನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಸಾಧ್ಯವಾಗಿಲ್ಲವೆಂಬ ಕಾರಣದಿಂದಾಗಿ, ಮೇಲ್ಕಂಡ 6 ಜಿಲ್ಲೆಗಳಿಗೆ ಮಾತ್ರ ಸೀಮಿತವಾಗುವಂತೆ "ಇ-ಸ್ವತ್ತು" ತಂತ್ರಾಂಶದಿಂದ ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ವಿನಾಯಿತಿ ನೀಡಲಾಗಿದೆ.

(ಟಿ. ನಾರಾಯಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ನೋ&ಮು).

ಇವರಿಗೆ:

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು-ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 500 ಪ್ರತಿಯನ್ನು ಕಂದಾಯ ಇಲಾಖೆ, ನೋಂದಣಿ ಮತ್ತು ಮುದ್ರಾಂಕ ಶಾಖೆ, ಕೊಠಡಿ ಸಂಖ್ಯೆ: 531, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಒದಗಿಸಲು ಕೋರಿದೆ.

<u>ಪ್ರತಿಯನ್ನು</u>

(1) ಪ್ರಧಾನ ಮಹಾಲೇಖಪಾಲರು (ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560 001.

(2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.

(3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

(4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರ್ವಜನಿಕ ಉದ್ದಿಮೆಗಳ ಇಲಾಖೆ.

(5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ವಸತಿ ಇಲಾಖೆ.

(6) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, ಬೆಂಗಳೂರು.

(7) ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

(8) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

(9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

(10) ಮಾನ್ಯ ಕಂದಾಯ ಸಚಿವರ ಸಂಸದೀಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

(11) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

(12) ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳು / ಎಲ್ಲಾ ಉಪ ನೋಂದಣಾಧಿಕಾರಿಗಳು (ಐಜಿಆರ್ ರವರ ಮುಖಾಂತರ).

(13)ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ, ಭೂಮಿ&ಯುಪಿಓಆರ್) ಇವರ ಆಪ್ತ ಕಾರ್ಯದರ್ಶಿ.

(14) ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ & ನೋ&ಮು).

(15) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.